ದಿನಾಂಕಃ **07-08-2024** ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಪಾಟೀ ಸವಾಲುಃ ವಾದಿ ಪರ ಶ್ರೀ ಟಿ ಜಿ ವಕೀಲರಿಂದ,**

1) ವಾದಿ ಹಾಜರುಪಡಿಸಿರುವ ದಾಖಲಾತಿಗಳನ್ನು ನಾನು ಪರಿಶೀಲಿಸಿರುತ್ತೇನೆ. ನಿಪಿ 8 ಕರಾರು ಪತ್ರಕ್ಕೆ ನಾನು 2 ನೇ ಪ್ರತಿವಾದಿ ಮತ್ತು 4 ನೇ ಪ್ರತಿವಾದಿ ಕನ್ನಡ ಭಾಷೆಯಲ್ಲಿ ಸಹಿ ಮಾಡಿರುತ್ತೇವೆ ಎಂದರೆ ಸರಿಯಲ್ಲ. ಪ್ರತಿವಾದಿ 3 ಮತ್ತು 5 ರವರು ಆಂಗ್ಲ ಭಾಷೆಯಲ್ಲಿ ಸಹಿ ಮಾಡಿರುತ್ತಾರೆ ಎಂದರೆ ಸರಿಯಲ್ಲ. ವಾದಿಯು ಕಳುಹಿಸಿರುವ ತಿಳುವಳಿಕೆ ಪತ್ರಕ್ಕೆ ನಾನು ವಕೀಲರ ಮೂಲಕ ಪ್ರತ್ಯುತ್ತರ ನೀಡಿರುತ್ತೇನೆ ಎಂದರೆ ಸರಿ. ನಿಪಿ 3 ಅಂಚೆ ಸ್ವೀಕೃತಿಯಲ್ಲಿರುವ ಸಹಿ ನನ್ನದಾಗಿರುವುದಿಲ್ಲ. ನಿಪಿ-5 ರಲ್ಲಿರುವ ಸಹಿ ನನ್ನ ಹೆಂಡತಿಯದ್ದಾಗಿರುವುದಿಲ್ಲ. ಸಾಕ್ಷಿಗೆ ತಾನು ಸಲ್ಲಿಸಿರುವ ವಕಾಲತ್ ನಾಮೆಯಲ್ಲಿರುವ ಸಹಿಯನ್ನು ತಾನು ಮಾಡಿರುವುದಿಲ್ಲ ಎಂದು ನುಡಿಯುತ್ತಾರೆ.

2) ದಿಃ 05-11-2020 ರಂದು ನಾನು ಮತ್ತು ಇತರೆ ಪ್ರತಿವಾದಿಗಳು ವಾದಿ ಪರವಾಗಿ ದಾವಾ ಸ್ವತ್ತನ್ನು ಮಾರಾಟ ಮಾಡುತ್ತೇವೆ ಎಂದು ಕರಾರು ಪತ್ರ ಬರೆದುಕೊಟ್ಟಿರುತ್ತೇವೆ ಎಂದರೆ ಸರಿಯಲ್ಲ. ಕರಾರು ಪತ್ರ ಆದ ದಿನದಂದು ವಾದಿಯಿಂದ ನಾವುಗಳು ರೂ. 6,50,000/- ಹಣವನ್ನು ಪಡೆದುಕೊಂಡಿರುತ್ತೇವೆ ಎಂದರೆ ಸರಿಯಲ್ಲ. ನಿಪಿ 8 ರಲ್ಲಿರುವ ಸಹಿಗಳು ನಾನು ಮತ್ತು ಇತರೆ ಪ್ರತಿವಾದಿಗಳು ಮಾಡಿರುತ್ತೇವೆ ಎಂದರೆ ಸರಿಯಲ್ಲ. ವಾದಿ ಪರವಾಗಿ ನಿಪಿ 8 ಕರಾರು ಪತ್ರವನ್ನು ಬರೆದುಕೊಟ್ಟಿದ್ದರೂ ಸಹ ಬರೆದುಕೊಟ್ಟಿಲ್ಲ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

3) ಅಂದಾನಿಗೌಡ ಮಗ ರಾಮೇಗೌಡ ನನಗೆ ಪರಿಚಯ ಇರುವುದಿಲ್ಲ. ನಿಪಿ-8 ಕರಾರು ಪತ್ರಕ್ಕೆ ರಾಮೇಗೌಡ, ಮಂಜುನಾಥ್, ಸತೀಶ್ ಚಂದ್ರ ಸಾಕ್ಷಿದಾರರಾಗಿ ಸಹಿ ಹಾಕಿರುತ್ತಾರೆ ಎಂದರೆ ಸರಿಯಲ್ಲ. ಪತ್ರ ಬರಹಗಾರ ನಾಗರಾಜು ರವರು ನಿಪಿ 8 ಕರಾರು ಪತ್ರವನ್ನು ನಮ್ಮ ಸಮಕ್ಷಮ ತಯಾರು ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಾವುಗಳು ವಾದಿಯಿಂದ ಹೆಚ್ಚಿನ

ಬೇಡಿಕೆ ಮಾಡಿರುತ್ತೇವೆ ಎಂದರೆ ಸರಿಯಲ್ಲ. ವಾದಿ ನನ್ನ ಮತ್ತು ಇತರೆ ಪ್ರತಿವಾದಿಗಳ ಸಹಿಯನ್ನು ಸೃಷ್ಟಿಸಿದ ಬಗ್ಗೆ ಅವರ ವಿರುದ್ಧ ಪೋಲೀಸ್ ದೂರು ದಾಖಲು ಮಾಡಿರುವುದಿಲ್ಲ. ನನ್ನ ನೈಜ ಸಹಿಗಳನ್ನು ರುಜುವಾತು ಪಡಿಸಲು ಇತರೆ ದಾಖಲೆಗಳನ್ನು ಹಾಜರುಪಡಿಸಿರುವುದಿಲ್ಲ. ವಾದಿ ಪರವಾಗಿ ನೊಂದಾಯಿತ ಕ್ರಯ ಪತ್ರವನ್ನು ಬರೆದುಕೊಡುವುದರಿಂದ ತಪ್ಪಿಸಿಕೊಳ್ಳಲು ಸುಳ್ಳು ತಕರಾರು ಸಲ್ಲಿಸಿ ಸುಳ್ಳು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ವಾದಿ ಸಂಪೂರ್ಣ ಕ್ರಯದ ಮೊಬಲಗನ್ನು ಸಂದಾಯ ಮಾಡಿರುವುದರಿಂದ ನಾನು ಮತ್ತು ಇತರೆ ಪ್ರತಿವಾದಿಗಳು ಕರಾರು ಪತ್ರದಂತೆ ಕ್ರಯ ಪತ್ರ ಮಾಡಿಕೊಡಲು ಬಾಧ್ಯಸ್ಥರು ಎಂದರೆ ಸರಿಯಲ್ಲ.

ಮರುವಿಚಾರಣೆಃ ಇಲ್ಲ

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು.)

ಓ ಹೇ.ಕೇ.ಸ.ಇ.ಒ.,

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಕೆ.ಆರ್.ನಗರ